# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ.ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 217 (315) |
| ಉತ್ತರಿಸಬೇಕಾದ ದಿನಾಂಕ | 13-09-2022 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಜಿಲ್ಲೆಯಲ್ಲಿ ಜರುಗುತ್ತಿರುವ ಒಳಚರಂಡಿ (ಯುಜಿಡಿ) ಕಾಮಗಾರಿಯಿಂದ ರಸ್ತೆಗಳು ಹದಗೆಟ್ಟಿದು ಶಾಲಾ ಮಕ್ಕಳು ಸಾರ್ವಜನಿಕರು ಅಪಘಾತಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬೀದರ ಜಿಲ್ಲಾ ವ್ಯಾಪ್ತಿಯಲ್ಲಿ ಮಂಡಳಿ ವತಿಯಿಂದ ಕೇಂದ್ರ ಪುರಸ್ಕೃತ ಅಮೃತ್ ಯೂಜನೆಯಡಿ ಬೀದರ್ ನಗರದ ವಲಯ-2, ವಲಯ-3 ಮತ್ತು ವಲಯ-1 ರಲ್ಲಿ ಬಿಟ್ಟು ಹೋದ ಪ್ರದೇಶಗಳಲ್ಲಿ ಒಳಚರಂಡಿ ಯೋಜನೆಯನ್ನು ಕೈಗೆತ್ತಿಕೂಳ್ಳಲಾಗಿದೆ. ಸದರಿ ಕಾಮಗಾರಿಯಿಂದ ಯಾವುದೇ ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಅಪಘಾತಕ್ಕೀಡಾಗಿರುವ ಪ್ರಕರಣಗಳ ಬಗ್ಗೆ ಮಂಡಳಿಯ ಗಮನಕ್ಕೆ ಬಂದಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಅಂತಹ ಕಳಪೆ ಕೆಲಸಮಾಡಿದ್ದ ಗುತ್ತಿಗೆದಾರರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮವೇನು; ಅಪಘಾತವಾದ ಪ್ರಕರಣಗಳೆಷ್ಟು; | |
| ಇ) | ಅಗೆದ ರಸ್ತೆಯನ್ನು ಪುನಃ ಸುಸ್ಥಿತಿಯಲ್ಲಿಡುವಂತಹ ಕೆಲಸಗಳನ್ನು ನಿರ್ವಹಿಸಿದ ಗುತ್ತಿಗೆದಾರರ ಮೇಲೆ ಯಾವ ಕ್ರಮ ವಹಿಸಲಾಗುತ್ತಿದೆ; (ಕ್ರಮವಹಿಸಿದ್ದಲ್ಲಿ ಅಂತಹ ಪ್ರಕರಣಗಳ ವಿವರ ನೀಡುವುದು) | ಬೀದರ ಒಳಚರಂಡಿ ಕಾಮಗಾರಿ ಕಾರ್ಯಗತಗೊಳಿಸುವಾಗ ನಗರದ ವಲಯ-2, ವಲಯ-3 ರಲ್ಲಿ ಅಗೆದ ರಸ್ತೆಗಳನ್ನು ಪುನರ್ ನಿರ್ಮಾಣ ಮಾಡಲಾಗಿದೆ. ಬೀದರ ನಗರದ ವಲಯ-3 ಮತ್ತು ವಲಯ-1 ರಲ್ಲಿ ಬಿಟ್ಟುಹೋದ ಪ್ರದೇಶಗಳ ಒಳಚರಂಡಿ ಕಾಮಗಾರಿಯಡಿ ಸುಮಾರು 20 ಕಿ.ಮೀ. ರಸ್ತೆಯನ್ನು ಅಗೆದು ಪೈಪಲೈನ ಹಾಕಲಾಗಿದ್ದು, 14.10 ಕಿ.ಮೀ ರಸ್ತೆಯನ್ನು ಪುನರ್ ನಿರ್ಮಾಣ ಮಾಡಲಾಗಿದೆ. ಬಾಕಿ ಉಳಿದ 5.90 ಕಿ.ಮೀ ರಸ್ತೆಯ ಪುನರ್ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದೆ. |

| | | |
|---|---|---|
| ಈ) | ರಸ್ತೆ ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳದೆ ಕಳಪೆ ಮಟ್ಟದಲ್ಲಿ ನಿರ್ವಹಿಸಿದ್ದರೆ ಅಂತಹ ಗುತ್ತಿಗೆದಾರರ ಮೇಲೆ ಯಾವ ಕ್ರಮ ವಹಿಸಲಾಗಿದೆ ? (ಪ್ರಕರಣಗಳ ಸಹಿತಿ ವಿವರ ನೀಡುವುದು) | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ಕೈಗೊಂಡಿರುವ ಕಾಮಗಾರಿಯಲ್ಲಿ, ಯಾವುದೇ ಕಳಪೆ ಮಟ್ಟದ ಕಾಮಗಾರಿಯು ಕೈಗೊಂಡಿರುವುದಿಲ್ಲ. |

ಸಂಖ್ಯೆ: ನಅಇ 130 ಯುಎಂಎಸ್ 2022

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು